# ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
# KARNATAKA LEGISLATIVE ASSEMBLY RESEARCH AND REFERENCE BRANCH

## ಪತ್ರಿಕಾ ತುಣುಕುಗಳು
## PAPER CLIPPINGS

ಇಲಾಖೆ / ವಿಷಯ : DEPARTMENT / SUBJECT: ಮುಖ್ಯಮಂತ್ರಿ

ಪತ್ರಿಕೆಯ ಹೆಸರು : NAME OF THE NEWS PAPER: ಉದಯ ವಾಣಿ   ದಿನಾಂಕ : DATE 3/6/20

# ಸಿಎಂಗೆ ಕೃತಜ್ಞತೆ ಸಲ್ಲಿಸಿದ ರಮೇಶ್ ಜಾರಕಿಹೊಳಿ

ಉವಾ 3/6/20

**ಬೆಂಗಳೂರು:** ಬೆಳಗಾವಿ ಜಿಲ್ಲಾ ಉಸ್ತುವಾರಿ ಸಚಿವರನ್ನಾಗಿ ನೇಮಿಸಿದ್ದಕ್ಕೆ ರಮೇಶ್ ಜಾರಕಿಹೊಳಿ ಅವರು ಮುಖ್ಯಮಂತ್ರಿ ಯಡಿಯೂರಪ್ಪ ಅವರಿಗೆ ಕೃತಜ್ಞತೆ ಸಲ್ಲಿಸಿದ್ದಾರೆ.

ಈ ಕುರಿತು ಹೇಳಿಕೆ ನೀಡಿ, ನನ್ನ ಮೇಲೆ ಸಂಪೂರ್ಣ ವಿಶ್ವಾಸವಿಟ್ಟು ಬೆಳಗಾವಿ ಜಿಲ್ಲಾ ಉಸ್ತುವಾರಿ ಸಚಿವರನ್ನಾಗಿ ನೇಮಿಸಿರುವುದಕ್ಕೆ ಮುಖ್ಯಮಂತ್ರಿಯವರಿಗೆ ಆಭಾರಿಯಾಗಿದ್ದೇನೆ. ಜಿಲ್ಲೆಯ ಎಲ್ಲ ಶಾಸಕರ ಸಹಕಾರ ಪಡೆದು ತೆರೆದ ಮನಸ್ಸಿನಿಂದ ಬೆಳಗಾವಿ ಜಿಲ್ಲೆಯ ಅಭಿವೃದ್ಧಿಗೆ ಶ್ರಮಿಸುತ್ತೇನೆ. ಪ್ರಧಾನಿ ಮೋದಿ, ಗೃಹ ಸಚಿವ ಅಮಿತ್ ಶಾ, ರಾಷ್ಟ್ರೀಯ ಬಿಜೆಪಿ ಅಧ್ಯಕ್ಷರಾದ ಜೆ.ಪಿ.ನಡ್ಡಾ ರಾಷ್ಟ್ರೀಯ ಪ್ರಧಾನ ಕಾರ್ಯದರ್ಶಿ ಬಿ.ಎಲ್.ಸಂತೋಷ್, ಸಂಪುಟದ ಎಲ್ಲ ಸಹೋದ್ಯೋಗಿ ಮಿತ್ರರಿಗೆ ಬಿಜೆಪಿ ರಾಜ್ಯಾಧ್ಯಕ್ಷ ನಳೀನ್‌ಕುಮಾರ್ ಕಟೀಲ್ ಅವರಿಗೆ ನಾನು ಚಿರ ಋಣಿಯಾಗಿದ್ದೇನೆ ಎಂದು ಹೇಳಿದ್ದಾರೆ.

**ಕುಮಟಳ್ಳಿ ಕೃತಜ್ಞತೆ:** ಕೊಳೆಗೇರಿ ಅಭಿವೃದ್ಧಿ ಮಂಡಳಿಗೆ ಅಧ್ಯಕ್ಷರನ್ನಾಗಿ ನೇಮಿಸಿದ್ದಕ್ಕೆ ಮಹೇಶ್ ಕುಮಟಳ್ಳಿ ಸಹ ಮುಖ್ಯಮಂತ್ರಿಯ ಯಡಿಯೂರಪ್ಪ ಅವರಿಗೆ ಕೃತಜ್ಞತೆ ಸಲ್ಲಿಸಿದ್ದು ಸಮಾಜ ಸೇವೆಯನ್ನು ಕಾಯಕವನ್ನಾಗಿ ಮಾಡಿಕೊಂಡಿರುವ ನನ್ನ ಮೇಲೆ ವಿಶ್ವಾಸವಿಟ್ಟು ಕೊಳೆಗೇರಿ ಅಭಿವೃದ್ಧಿ ಮಂಡಳಿಗೆ ಅಧ್ಯಕ್ಷರಾಗಿ ನೇಮಿಸಿದ ಮುಖ್ಯಮಂತ್ರಿಯವರು ಹಾಗೂ ಪಕ್ಷದ ರಾಜ್ಯಾಧ್ಯಕ್ಷ ನಳೀನ್‌ಕುಮಾರ್ ಕಟೀಲ್ ಅವರಿಗೆ ವಂದನೆ ಅರ್ಪಿಸುತ್ತೇನೆ ಎಂದು ತಿಳಿಸಿದ್ದಾರೆ.